ಕರ್ನಾಟಕ ಸರ್ಕಾರ

# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** ರಾಜ್ಯಾದ್ಯಂತ ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸಿರುವ ಅಥವಾ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದು ಕಟ್ಟಡ ನಿರ್ಮಿಸಿರುವ ಪ್ರಕರಣಗಳಿಗೆ ಹಾಗೂ ಯಾವುದೇ ವಿದ್ಯುತ್ ಸಂಪರ್ಕ ಪಡೆಯದೇ ಕಟ್ಟಡ ಪೂರ್ಣಗೊಂಡಿರುವ ಪ್ರಕರಣಗಳಿಗೆ ಮಾತ್ರ ಅನ್ವಯಿಸುವಂತೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ, ವಿನಾಯಿತಿ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ನಅಇ 334 ಎಂಎನ್‌ಯು 2025 (ಭಾಗ), ದಿನಾಂಕ: 05.6.2026
2. ಸರ್ಕಾರದ ಆದೇಶ ಸಂಖ್ಯೆ:ನಅಇ 283 ಎಂಎನ್‌ಇ 2025 (ಇ), ದಿನಾಂಕ: 05.6.2026
3. ಸರ್ಕಾರದ ಆದೇಶ ಸಂಖ್ಯೆ:ನಅಇ 244 ಜಿಇಎಲ್ 2025, ದಿನಾಂಕ: 05.6.2026
4. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿಪಿಆರ್ 856 ಜಿಪಿಎ 2025, ದಿನಾಂಕ: 09.6.2026
5. ಸಚಿವ ಸಂಪುಟ ನಿರ್ಣಯ ಪ್ರಕರಣ ಸಂಖ್ಯೆ: ಸಸಂಶಾ(ಸಿ):67/2026; 68/2026, ದಿನಾಂಕ: 17.6.2026

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಿಂದ (4)ರ ಆದೇಶಗಳಲ್ಲಿ ಕ್ರಮವಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿ, ರಾಜ್ಯದಲ್ಲಿನ ಮಹಾನಗರ ಪಾಲಿಕೆಗಳ ವ್ಯಾಪ್ತಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿ ಮತ್ತು ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ 2400 ಚದರಡಿವರೆಗಿನ (+ 20% ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ, ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್ + 4 ಮಹಡಿಗಳನ್ನು ಹೊಂದಿರುವ ವಸತಿ ಕಟ್ಟಡಗಳು, ಪೂರ್ಣಗೊಂಡು ವಿದ್ಯುತ್ ಸಂಪರ್ಕಕ್ಕಾಗಿ ದಿನಾಂಕ: 31.5.2026ರ ಒಳಗಾಗಿ ಅರ್ಜಿ ಸಲ್ಲಿಸಿದ್ದಲ್ಲಿ, ವಿದ್ಯತ್ ಸಂಪರ್ಕ ಪಡೆಯಲು ಒಂದು ಬಾರಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ, ವಿನಾಯಿತಿ ನೀಡಿ ನಗರಾಭಿವೃದ್ಧಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ಇಲಾಖೆಗಳು ಆದೇಶ ಹೊರಡಿಸಿರುತ್ತವೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ದಿನಾಂಕ: 20.6.2026 ರಂದು ನಡೆದ ಸಚಿವ ಸಂಪುಟದ ಸಭೆಯ ಪ್ರಕರಣ ಸಂಖ್ಯೆ: ಸಸಂಶಾ(ಸಿ):67/2026; 68/2026 ರಲ್ಲಿ "ದಿನಾಂಕ: 03ನೇ ಜೂನ್, 2026 ರಂದು ಸಂಜೆ 6:00 ಗಂಟೆಗೆ ನಡೆದ ಸಚಿವ ಸಂಪುಟದ ಅನೌಪಚಾರಿಕ ಸಭೆಯ (ವಿಷಯ ಸಂಖ್ಯೆ: ಸಿ.310/2026 ರಲ್ಲಿನ ಕ್ರ.ಸಂ.4ರ ನಿರ್ಣಯವನ್ನು ಮಾನ್ಯ ಸಚಿವ ಸಂಪುಟವು ವಿಸ್ತ್ರುತವಾಗಿ ಚರ್ಚಿಸಿ, ಸಾರ್ವಜನಿಕ ಹಿತದೃಷ್ಟಿಯಿಂದ ಈ ಕೆಳಕಂಡ ಮಾರ್ಪಾಡಿನೊಂದಿಗೆ ಮೇಲಿನ ನಿರ್ಣಯಗಳನ್ನು ಸ್ಥಿರಿಕರಿಸಿರುತ್ತದೆ.

"2400 ಚದರ ಅಡಿಗಳವರೆಗೆ (+20% ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್ + 4 ಮಹಡಿಗಳನ್ನು ಹೊಂದಿರುವ ವಸತಿ ಕಟ್ಟಡಗಳು, ಪೂರ್ಣಗೊಂಡು ವಿದ್ಯುತ್ ಸಂಪರ್ಕಕ್ಕಾಗಿ ದಿನಾಂಕ: 31.5.2026ರ ಒಳಗಾಗಿ ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸಿರುವ ಅಥವಾ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದು ಕಟ್ಟಡ ನಿರ್ಮಿಸಿರುವ ಪ್ರಕರಣಗಳಿಗೆ ಹಾಗೂ ಯಾವುದೇ ವಿದ್ಯುತ್ ಸಂಪರ್ಕ ಪಡೆಯದೆ ಕಟ್ಟಡ ಪೂರ್ಣಗೊಂಡಿರುವ ಪ್ರಕರಣಗಳಿಗೆ ಮಾತ್ರ ಅನ್ವಯಿಸುವಂತೆ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಆದೇಶ ಹೊರಡಿಸುವ ದಿನಾಂಕದಿಂದ 15 ದಿನಗಳವರೆಗೆ

--2

ಅರ್ಜಿ ಸಲ್ಲಿಸಲು ಅವಕಾಶ ನೀಡಿ ಒಂದು ಬಾರಿಯ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವುದರಿಂದ, ವಿನಾಯಿತಿ ನೀಡಲು ಸಚಿವ ಸಂಪುಟವು ನಿರ್ಧರಿಸಿತು.

ಮುಂದುವರೆದು, ಗ್ರಾಮೀಣ ಪ್ರದೇಶಗಳಲ್ಲಿ ರೈತರು ವಾಸಿಸಿರುವ ಮನೆ, ತೋಟದ ಮನೆ, ಕೃಷಿ ಉಪಕರಣಗಳನ್ನು ಇಡುವ ಮನೆ, ದನದ ಕೊಟ್ಟಿಗೆ, ರೇಷ್ಮೆ ಗೂಡಿನ ಮನೆ - ಇವುಗಳಿಗೆ ವಿದ್ಯುತ್ ಸಂಪರ್ಕಕ್ಕಾಗಿ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವುದರಿಂದ, ವಿನಾಯಿತಿ ನೀಡಲು ಸಚಿವ ಸಂಪುಟವು ನಿರ್ಧರಿಸಿದೆ.

ವಿದ್ಯುತ್ ಸಂಪರ್ಕಕ್ಕಾಗಿ ಸ್ವಾಧೀನಾನುಭವ ಪ್ರಮಾಣಪತ್ರದಿಂದ ಒಂದು ಬಾರಿಗೆ ವಿನಾಯಿತಿ ನೀಡಿರುವುದರಿಂದ, ಇದರ ಅನುಷ್ಠಾನಕ್ಕಾಗಿ ಆದೇಶ ಹೊರಡಿಸುವಂತೆ ಇಂಧನ ಇಲಾಖೆಗೆ ಸಚಿವ ಸಂಪುಟವು ಸೂಚಿಸಿರುತ್ತದೆ.

ಮೇಲಿನ ಸಚಿವ ಸಂಪುಟದ ನಿರ್ಣಯದ ಹಿನ್ನೆಲೆಯಲ್ಲಿ, ಸರ್ಕಾರದ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಎನರ್ಜಿ 556 ಇಇಬಿ 2026**

**ಬೆಂಗಳೂರು ದಿನಾಂಕ:22.6.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿ, ರಾಜ್ಯದಲ್ಲಿನ ಮಹಾನಗರ ಪಾಲಿಕೆಗಳ ವ್ಯಾಪ್ತಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿ ಮತ್ತು ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ "2400 ಚದರ ಅಡಿಗಳವರೆಗೆ (+20% ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್ + 4 ಮಹಡಿಗಳನ್ನು ಹೊಂದಿರುವ ವಸತಿ ಕಟ್ಟಡಗಳು, ಪೂರ್ಣಗೊಂಡು ವಿದ್ಯುತ್ ಸಂಪರ್ಕಕ್ಕಾಗಿ ದಿನಾಂಕ: 31.5.2026ರ ಒಳಗಾಗಿ ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸಿರುವ ಅಥವಾ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದು ಕಟ್ಟಡ ನಿರ್ಮಿಸಿರುವ ಪ್ರಕರಣಗಳಿಗೆ ಹಾಗೂ ಯಾವುದೇ ವಿದ್ಯುತ್ ಸಂಪರ್ಕ ಪಡೆಯದೆ ಕಟ್ಟಡ ಪೂರ್ಣಗೊಂಡಿರುವ ಪ್ರಕರಣಗಳಿಗೆ ಮಾತ್ರ ಅನ್ವಯಿಸುವಂತೆ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಈ ಆದೇಶ ಹೊರಡಿಸಿದ ದಿನಾಂಕದಿಂದ **15** ದಿನಗಳವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿ, ಒಂದು ಬಾರಿಯ ಕ್ರಮವಾಗಿ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವುದರಿಂದ ವಿನಾಯಿತಿ ನೀಡಿದೆ.

ಮುಂದುವರೆದು, ಗ್ರಾಮೀಣ ಪ್ರದೇಶಗಳಲ್ಲಿ ರೈತರು ವಾಸಿಸುವ ಮನೆ, ತೋಟದ ಮನೆ, ಕೃಷಿ ಉಪಕರಣಗಳನ್ನು ಇಡುವ ಮನೆ, ದನದ ಕೊಟ್ಟಿಗೆ, ರೇಷ್ಮೆ ಗೂಡಿನ ಮನೆ - ಇವುಗಳಿಗೆ ವಿದ್ಯುತ್ ಸಂಪರ್ಕಕ್ಕಾಗಿ ಸ್ವಾಧೀನಾನುಭವ ಪ್ರಮಾಣಪತ್ರ ಪಡೆಯುವುದರಿಂದ, ವಿನಾಯಿತಿ ನೀಡಿ ಆದೇಶಿಸಿದೆ.

ವಿದ್ಯುತ್ ಸರಬರಾಜು ಕಂಪನಿಗಳು ವಿದ್ಯುತ್ ಸಂಪರ್ಕ ನೀಡಲು ಅನುಸರಿಸಬೇಕಾದ ಸಾಮಾನ್ಯ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/6/26
(ಶಾಂತಾರಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (A&E) ಕರ್ನಾಟಕ ಸರ್ಕಾರ, ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು

--3

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ವಿಕಾಸ ಸೌಧ, ಬೆಂಗಳೂರು
7. ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು
9. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು
10. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ
11. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ, ಮೈಸೂರು
12. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರಗಿ
13. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು
14. ಸರ್ಕಾರದ ಅಪರ ಕಾರ್ಯದರ್ಶಿ, (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
15. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
16. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
17. ವ್ಯವಸ್ಥಾಪಕ ನಿರ್ದೇಶಕರು, ಹುಕ್ಕೇರಿ ಗ್ರಾಮೀಣಾ ವಿದ್ಯುತ್ ಸರಬರಾಜು ಕಂಪನಿ, ಹುಕ್ಕೇರಿ.
18. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
20. ಶಾಖಾ ರಕ್ಷಾ ಕಡತ/ಕಛೇರಿ ಪ್ರತಿ/ ಹೆಚ್ಚುವರಿ ಪ್ರತಿಗಳು.